ವಿ-330 (18)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಪುಟ್ಟಣ್ಣ, ಅರುಣ ಶಹಾಪುರ ಮತ್ತು ಎಸ್.ವ್ಹಿ.ಸಂಕನೂರ ಇವರುಗಳು ನಿಯಮ-330ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಉತ್ತರ**

ವಿಷಯ:

**ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಗಳನ್ನು ನಿಯಮಬಾಹಿರವಾಗಿ ತಿರಸ್ಕರಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.**

**ಉತ್ತರ:**

**ಪ್ರಾಥಮಿಕ ಶಿಕ್ಷಣ:**

ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಅಗತ್ಯಕ್ಕಿಂತ ಹೆಚ್ಚುವರಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು, ಹೆಚ್ಚುವರಿ ಅನುದಾನಿತ ಹುದ್ದೆಗಳು ಖಾಲಿಯಾದಲ್ಲಿ ಅಥವಾ ಒಂದು ಖಾಸಗಿ ಪ್ರಾಥಮಿಕ ಶಾಲೆಯನ್ನು ಸಹಾಯನುದಾನಕ್ಕೆ ಒಳಪಡಿಸಿದ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳಿಂದ ತುಂಬಿಕೊಳ್ಳಬೇಕೆ ಹೊರತು ನೇರ ನೇಮಕಾತಿ ಮಾಡತಕ್ಕದ್ದಲ್ಲಎಂಬುದಾಗಿ ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ 267 ಪಿಎಂಸಿ 2007 ದಿನಾಂಕ:12-10-2007 ರಲ್ಲಿ ಆದೇಶಿಸಲಾಗಿದೆ.

**ಪ್ರೌಢ ಶಿಕ್ಷಣ ಮತ್ತು ಪದವಿಪೂರ್ವ ಶಿಕ್ಷಣ :**

ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ದಿನಾಂಕ: 31-12-2015 ರವರೆಗೆ ತೆರವಾಗಿರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ ಇಡಿ 14 ಎಸ್ ಇ.ಪಿ 2017 ದಿನಾಂಕ:25-09-2018ರನ್ವಯ ಅನುಮತಿ ನೀಡಲಾಗಿದೆ.

ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8 2020 ದಿನಾಂಕ: 10.06.2020ರಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ 2020-21ನೇ ಸಾಲಿನಲ್ಲಿ ಅನುದಾನಸಹಿತ ವಿಧ್ಯಾಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ ಎಂದು ತಿಳಿಸಿದ್ದು, ಅನುದಾನಿತ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿ ಉಂಟಾಗುವ ಹುದ್ದೆಗಳನ್ನು 2020-2021ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ ಎಂದು ಮಿತವ್ಯಯ ಆದೇಶ ಜಾರಿ ಮಾಡಿದ್ದು, ಸದರಿ ಆದೇಶವು ಪ್ರಸ್ತುತವು ಸಹ ಜಾರಿಯಲ್ಲಿರುತ್ತದೆ.

ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಇಪಿ 59 ಎಸ್.ಇ.ಎಸ್. 2020 ದಿನಾಂಕ: 05.07.2021ರಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ 257 ಹುದ್ದೆಗಳನ್ನು 2021-22ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ (ಜೂನ್-ಜುಲೈ) ಭರ್ತಿ ಮಾಡಿಕೊಳ್ಳಲುಅನುಮತಿಸಲಾಗಿದೆ.ಹಾಗೆಯೇ, ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ 173 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿದೆ.

The Karnataka Educational Institutions(Recruitment and terms and conditions of services of employees in private aided primary and secondary educational Institutions) Rules-1999ರನ್ವಯ ಅನುದಾನಿತ ಪ್ರೌಢಶಾಲೆಗಳಲ್ಲಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲುಹೆಚ್ಚಾಗಿ ಪ್ರಚಾರದಲ್ಲಿರುವಕನಿಷ್ಠ ಒಂದು ರಾಜ್ಯ ಮಟ್ಟದ ದಿನಪತ್ರಿಕೆ ಹಾಗೂ ಒಂದು ಜಿಲ್ಲಾ ಮಟ್ಟದ ದಿನಪತ್ರಿಕೆಯಲ್ಲಿ ಪತ್ರಿಕೆ ಪ್ರಕಟಣೆ ನೀಡಿದ್ದಲ್ಲಿ ಹಾಗೂ ನಿಯಮಾನುಸಾರ ಅರ್ಹತೆಗಳನ್ನು ಹೊಂದಿರುವುದನ್ನು ಖಚಿತಪಡಿಸಿಕೊಂಡು ನೇಮಕಾತಿ ಪ್ರಕ್ರಿಯೆಗೆ ಅನುಮೋದನೆ ನೀಡಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಪಿ 476 ಎಸ್ಇಎಸ್ 2021**

(ಡಾ.ಅಶ್ವತ್ಥನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಐ.ಟಿ., ಮತ್ತು ಬಿ.ಟಿ.,
ವಿಜ್ಞಾನ ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಸಚಿವರು.